ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಅನುದಾನರಹಿತ ಶಾಲಾ ಕಾಲೇಜುಗಳು

448 - ಶ್ರೀ ಬಿ.ಎಸ್. ಯಡಿಯೂರಪ್ಪ (ಶಿಕಾರಿಪುರ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪರಿಶಿಷ್ಟ ಜಾತಿ:ಪರಿಶಿಷ್ಟ ಪಂಗಡ ಶಾಶ್ವತ ಅನುದಾನ ರಹಿತ ಶಾಲಾ ಕಾಲೇಜುಗಳಲ್ಲಿನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ನೇಮಕಾತಿಯನ್ನು ಸರ್ಕಾರದವರು ಅನುಮೋದಿಸಲು ಇರುವ ತೊಂದರೆಗಳೇನು?

ಆ) ಹಾಗಿದ್ದಲ್ಲಿ ಈ ಸಿಬ್ಬಂದಿಯ ನೇಮಕಾತಿಯನ್ನು ಅನುಮೋದಿಸಲು ಸರ್ಕಾರದವರು ಕೈಗೊಳ್ಳಲಾದ ಕ್ರಮಗಳೇನು?

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಪ್ರಸ್ತುತ ಶಾಶ್ವತ ಅನುದಾನ ರಹಿತವಾಗಿ ಮಂಜೂರಾದ ಶಾಲಾ-ಕಾಲೇಜುಗಳಲ್ಲಿ ಮಾಡಿಕೊಂಡ ನೇಮಕಾತಿಯನ್ನು ಅನುಮೋದಿಸಲಾಗುತ್ತಿಲ್ಲ.

ಆ) ಉದ್ಭವಿಸುವುದಿಲ್ಲ.

ವಿಶ್ವವಿದ್ಯಾಲಯಗಳಲ್ಲಿ ನಕಲಿ ಅಂಕಪಟ್ಟಿ

450 - ಶ್ರೀ ಬಿ.ಎಸ್. ಯಡಿಯೂರಪ್ಪನವರ (ಶಿಕಾರಿಪುರ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ನಕಲಿ ಅಂಕ ಪಟ್ಟಿ ಜಾಲವಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ, ಯಾವ ವಿಶ್ವವಿದ್ಯಾಲಗಳಲ್ಲಿ ಈವರೆಗೆ ಜಾಲ ಹರಡಿದೆ. ಇದನ್ನು ತಡೆಯಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಇ) ಮಂಗಳೂರು ವಿಶ್ವವಿದ್ಯಾಲಯದಲ್ಲಿ ಈ ಜಾಲ ಹರಡಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಶ್ರೀ ಡಿ. ಮಂಜುನಾಥ (ಉನ್ನತ ಶಿಕ್ಷಣ ಸಚಿವರು) :

ಅ) ಹೌದು.

ಆ) ಬೆಂಗಳೂರು ವಿಶ್ವವಿದ್ಯಾಲಯ - ಬಂದಿದೆ.

ಮೈಸೂರು ವಿಶ್ವವಿದ್ಯಾಲಯ - ಇಲ್ಲ.

ಗುಲ್ಬರ್ಗಾ ವಿಶ್ವವಿದ್ಯಾಲಯ - ಬಂದಿದೆ.

ಕರ್ನಾಟಕ ವಿಶ್ವ ವಿದ್ಯಾಲಯ - ಇಲ್ಲ.

ಮಂಗಳೂರು ವಿಶ್ವವಿದ್ಯಾಲಯ - ಬಂದಿದೆ.

ಕುವೆಂಪು ವಿಶ್ವವಿದ್ಯಾಲಯ - ಇಲ್ಲ.

ಸಂಬಂಧಿಸಿದ ವಿಶ್ವವಿದ್ಯಾಲಯಗಳೇ ಕ್ರಮ ಕೈಗೊಳ್ಳುತ್ತಿವೆ.

ಇ) ತಾ: 26.7.95ರ ಉದಯವಾಣಿ ಮತ್ತು ಮಂಗಳೂರು ಮಿತ್ರ ವಾರ್ತಾ ಪತ್ರಿಕೆಗಳಲ್ಲಿ ನಕಲಿ ಅಂಕಪಟ್ಟಿಗಳು ಮಾರಾಟವಾಗುತ್ತಿವೆಯೆಂದು ಪ್ರಕಟಿಸಲಾಗಿತ್ತು. ಅಂತಹ ನಕಲಿ ಪಟ್ಟಿಯನ್ನು ಪತ್ರಿಕೆಗಳಲ್ಲಿ ಪ್ರಕಟಿಸಲಾಗಿತ್ತು. ವಿಶ್ವವಿದ್ಯಾಲಯವು ಒಂದು ಉನ್ನತ ಮಟ್ಟದ ವಿಚಾರಣೆಯನ್ನು ನಡೆಸಲಾಗಿ ಇದು ಆಧಾರರಹಿತವೆಂದು ಸಾಬೀತಾಯಿತು.

ಮೈಸೂರು ಜಿಲ್ಲೆಯಲ್ಲಿ ಅನುದಾನರಹಿತ ಖಾಸಗಿ ಶಾಲೆಗಳು

451 - ಶ್ರೀ ಎಸ್. ಕೃಷ್ಣಪ್ಪ (ಬನ್ನೂರು) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರು ಜಿಲ್ಲೆಯಲ್ಲಿ ಮಾನ್ಯತೆ ಪಡೆದಿರುವ ಅನುದಾನ ರಹಿತ ಖಾಸಗಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು, ಹಾಗೂ ಸದರಿ ಶಾಲೆಗಳಲ್ಲಿರುವ ಶಿಕ್ಷಕರ ಸಂಖ್ಯೆಎಷ್ಟು (ತಾಲ್ಲೂಕುವಾರು ಮಾಹಿತಿ ನೀಡುವುದು)

ಆ) ಈ ಶಿಕ್ಷಕರುಗಳಿಗೆ ನಿಯಮದ ಪ್ರಕಾರ ವೇತನ ನೀಡುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ.

ಇ) ಹಾಗಿದ್ದಲ್ಲಿ, ನಿಯಮದ ಪ್ರಕಾರ ವೇತನ ನೀಡಲು ಸರ್ಕಾರದವರು ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಹೆಚ್.ಜಿ. ಗೋವಿಂದಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಪ್ರಾಥಮಿಕ ಶಾಲೆಗಳ ಸಂಖ್ಯೆ : 196

ಪ್ರೌಢಶಾಲೆಗಳ ಸಂಖ್ಯೆ : 105

(ತಾಲ್ಲೂಕುವಾರು ಪಟ್ಟಿ ಲಗತ್ತಿಸಿದೆ)

ಪ್ರಾಥಮಿಕ ಶಾಲಾ ಶಿಕ್ಷಕರ ಸಂಖ್ಯೆ 1,200

ಪ್ರೌಢ ಶಾಲಾ ಶಿಕ್ಷಕರ ಸಂಖ್ಯೆ 798